# Government of Karnataka
# Deposition Sheet Form No. R.P. 57

ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಲಿಂಗಸಗೂರ

ಸಿ/ ಸಿ ನಂಬರಃ 299/2024

ಸಿ ಡಬ್ಲ್ಯೂ- 10
ಪಿ ಡಬ್ಲ್ಯೂ- 10

| | | |
|---|---|---|
| ಸಾಕ್ಷಿದಾರರ ಹೆಸರು | ಃ- | ನಾಗಪ್ಪ |
| ತಂದೆಯ ಹೆಸರು | ಃ- | ದುರಗಪ್ಪ |
| ವಯಸ್ಸು | ಃ- | 59 ವರ್ಷ |
| ಉದ್ಯೋಗ | ಃ- | ಪಿ.ಎಸ್.ಐ ಕುಕನೂರು ಪೋಲಿಸ್ ಠಾಣೆ |
| ವಾಸಸ್ಥಳ | ಃ- | ಕುಕನೂರು |

***ದಿ. 17-04-2026 ರಂದು ಸಾಕ್ಷಿಯನ್ನು ವಿಡಿಯೋ ಕಾನ್ಪಿರೆನ್ಸ ಮೂಲಕ ಕರೆಯಿಸಿ ಪ್ರಮಾಣವಚನ ಭೋದಿಸಲಾಯಿತು.***

***ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.***

ನಾನು ದಿನಾಂಕ 30-11-2022 ರಿಂದ 07-06-2023 ವರೆಗೆ ನಾನು ಲಿಂಗಸುಗುರು ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಎಂದು ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕ 10-03-2023 ರಂದು ಸಂಜೆ 6-30 ನಾನು ಠಾಣೆಯಲ್ಲಿದ್ದಾಗ ಚಾ.ಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರಿನ ಆದಾರದ ಮೇಲೆ ಠಾಣಾ ಗುನ್ನಾ ಸಂಖ್ಯೆ 55/2023 ರಂತೆ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೂ ಹಾಗೂ ಮೇಲಾಧಿಕಾರಿಗಳಿಗೂ ಸಲ್ಲಿಸಿಕೊಂಡಿರುತ್ತೇನೆ. ದಿನಾಂಕ 11-03-2023 ರಂದು ಘಟನಾ ಸ್ಥಳಕ್ಕೆ ಬೆಟ್ಟಿ ನೀಡಿ ಪಂಚರಾದ ಚಾಸಾ-2 ಮತ್ತು 3 ರವರ ಸಮಕ್ಷಮದಲ್ಲಿ ಚಾ.ಸಾ-1 ರವರು ತೋರಿಸಿದ ಮೇರೆಗೆ ಬೆಳಿಗ್ಗೆ 10-00 ರಿಂದ 11-00 ಗಂಟೆಯವರೆಗೆ ಪಂಚನಾಮೆ ಮಾಡಿ ಫೋಟೋ ತೆಗೆಸಿರುತ್ತೇನೆ. ನಂತರ ಅದೇ ದಿನ ಚಾ.ಸಾ-1, 4 ರಿಂದ 7 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ದಿನಾಂಕ 07-06-2023 ರಂದು ವರ್ಗಾವಣೆಯಾಗಿದ್ದರಿಂದ ಮುಂದಿನ ತನಿಖೆಗಾಗಿ ಕಡತವನ್ನು ಚಾ.ಸಾ-11 ರವರಿಗೆ ಹಸ್ತಾಂತರಿಸಿರುತ್ತೇನೆ.

2. ದೂರನ್ನು ಈಗಾಗಲೇ ನಿ.ಪಿ-1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗಾಗಲೇ ನಿ.ಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-2(ಬಿ) ಎಂದು ಗುರುತಿಸಲಾಯಿತು. ಸ್ಥಳ ಪಂಚನಾಮೆಯನ್ನು ಈಗಾಗಲೇ ನಿ.ಪಿ-3 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ-3(ಡಿ) ಎಂದು ಗುರುತಿಸಲಾಯಿತು. ಪೋಟೋವನ್ನು ಈಗಾಗಲೇ ನಿ.ಪಿ-4 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ-4(ಎ) ಎಂದು ಗುರುತಿಸಲಾಯಿತು.

***ಪಾಟೀ ಸವಾಲು: ಶ್ರೀ. ಟಿ.ಆರ್.ಪಿ ವಕೀಲರಿಂದ. :-***

ದೂರು ನೀಡಲು ಠಾಣೆಗೆ ಚಾ.ಸಾ-1 ರವರು ಒಬ್ಬರೆ ಬಂದಿದ್ದರು. ಘಟನೆಯಾಗಿ ದೂರು ನೀಡಲು ಒಂದು ದಿನ ವಿಳಂಬವಾದ ಬಗ್ಗೆ ಮೇಲಾಧಿಕಾರಿಗಳಿಗೆ ತಿಳಿಸಲು ತಡವಾಗಿರುತ್ತದೆ. ಮೇಲಾಧಿಕಾರಿಗಳಿಗೆ ಪತ್ರದ ಮೂಲಕ ತಿಳಿಸಿದ್ದಾರೋ ಇಲ್ಲವೋ ನಾನು ತನಿಖೆ ಮಾಡಿರುವುದಿಲ್ಲ. ಪಂಚರಿಗೆ ನಾನು ಲಿಖಿತ ನೋಟಿಸು ಕೊಟ್ಟಿರುವುದಿಲ್ಲ. ನಾನು ಈ ಪ್ರಕರಣದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಚಾ.ಸಾ-1 ರವರು ಲೋಕ ನೌಕರನಾಗಿದ್ದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

*(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)*

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರದಾನ ಸಿವಿಲ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ..
ಲಿಂಗಸಗೂರು.